# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಎಸ್.ಎಲ್.ಧರ್ಮೇಗೌಡ
(ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 938

ಉತ್ತರ ದಿನಾಂಕ : 18.12.2018

| ಕ್ರ. ಸಂ: | ಪ್ರಶ್ನೆ | ಉತ್ತರಗಳು |
|---|---|---|
| ಅ) | ಚಿಕ್ಕಮಗಳೂರು ಮತ್ತು ಕಡೂರು ತಾಲ್ಲೂಕು ವ್ಯಾಪ್ತಿಯಲ್ಲಿನ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿಗೆ ತೊಂದೆಯಾಗಿ ಹಾಹಾಕಾರ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವುದು ವರದಿಯಾಗಿಲ್ಲ.<br>ಕಡೂರು ತಾಲ್ಲೂಕಿನಲ್ಲಿ ಕೆಲವು ಗ್ರಾಮಗಳಲ್ಲಿ ತೊಂದರೆಯಾಗಿರುವುದು ಗಮನಕ್ಕೆ ಬಂದಿದೆ. |
| ಆ) | ಹಾಗಿದ್ದಲ್ಲಿ, ಎಷ್ಟು ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯುಂಟಾಗಿದೆ; ಆ ಗ್ರಾಮಗಳಿಗೆ ಕುಡಿಯುವ ನೀರಿನ್ನು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನಲ್ಲಿ 3 ಗ್ರಾಮಗಳಿಗೆ ನೀರಿನ ಸಮಸ್ಯೆ ಉಂಟಾಗಿದೆ. ಸದರಿ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ ಹಾಗೂ 3 ಖಾಸಗಿ ಬೋರ್ ವೆಲ್ ಬಳಸಲಾಗುತ್ತಿದೆ. ಕಡೂರು ತಾಲ್ಲೂಕು ಬರಪೀಡಿತ ತಾಲ್ಲೂಕು ಎಂದು ಘೋಷಿಸಿದ್ದು, ಕುಡಿಯುವ ನೀರು ಸಮಸ್ಯೆ ನಿವಾರಿಸಲು ರೂ.50.00ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಈ ಪೈಕಿ ರೂ.25.00ಲಕ್ಷಗಳನ್ನು ತುರ್ತು ಕಾಮಗಾರಿಗಳಿಗಾಗಿ ಮೊದಲನೇ ಕಂತಿನಲ್ಲಿ ಬಿಡುಗಡೆ ಮಾಡಲಾಗಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತುರ್ತು ಕುಡಿಯುವ ನೀರಿಗೆ ಅನುದಾನ ಉಪಯೋಗಿಸಲು ಸೂಚಿಸಿದೆ. |
| (ಇ) | ಕುಡಿಯುವ ನೀರು ಪೂರೈಸಲು ಪ್ರಸಕ್ತ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದುವರೆವಿಗೂ ಎಷ್ಟು ಮತ್ತು ಯಾರಿಗೆ ಅನುದಾನ ಬಿಡುಗಡೆ ಮಾಡಲಾಗಿದೆ:(ವಿವರ ನೀಡುವುದು) | ಕುಡಿಯುವ ನೀರು ಪೂರೈಸಲು ಪ್ರಸಕ್ತ ಸಾಲಿನಲ್ಲಿ ಚಿಕ್ಕಮಗಳೂರು ತಾಲ್ಲೂಕಿಗೆ ಅನುಮೋದಿತ ಕಾಮಗಾರಿಗಳಿಗೆ NRDWP ಅಡಿಯಲ್ಲಿ ರೂ.571.29ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಕಡೂರು ತಾಲ್ಲೂಕಿಗೆ ಅನುಮೋದಿತ ಕಾಮಗಾರಿಗಳಿಗೆ NRDWP ಅಡಿಯಲ್ಲಿ ರೂ.989.98ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ತಾಲ್ಲೂಕು ವಾರು ಅನುದಾನ ಬಿಡುಗಡೆ ಮಾಡುತ್ತಿಲ್ಲ. ಚಿಕ್ಕಮಗಳೂರು ಜಿಲ್ಲೆಗೆ ಒಟ್ಟು ರೂ.2196.45ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.<br>SDP ಅಡಿಯಲ್ಲಿ ಕಡೂರು ತಾಲ್ಲೂಕಿನ ಅನುಮೋದಿತ ಕಾಮಗಾರಿಗಳಿಗೆ ರೂ.483.10ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.<br>ಪ್ರಸಕ್ತ ಸಾಲಿನಲ್ಲಿ ಕಡೂರು ತಾಲ್ಲೂಕು ಬರಪೀಡಿತ ತಾಲ್ಲೂಕು ಎಂದು ಘೋಷಿಸಿದ್ದು, ಕುಡಿಯುವ ನೀರು ಸಮಸ್ಯೆ ನಿವಾರಿಸಲು ರೂ.50.00ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಈ ಪೈಕಿ ರೂ.25.00ಲಕ್ಷಗಳನ್ನು ಮೊದಲನೇ ಕಂತಿನಲ್ಲಿ ಬಿಡುಗಡೆ ಮಾಡಲಾಗಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತುರ್ತು ಕುಡಿಯುವ ನೀರಿಗೆ ಅನುದಾನ ಉಪಯೋಗಿಸಲು ಸೂಚಿಸಿದೆ. |
| (ಈ) | ಹಾಗಿದ್ದಲ್ಲಿ, ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಕುಡಿಯುವ ನೀರಿನ ಕೊರತೆ ಇರುವ ಗ್ರಾಮಗಳಿಗೆ ಶಾಶ್ವತವಾಗಿ ಕುಡಿಯುವ ನೀರನ್ನು ಪೂರೈಸುವ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು) | ಬಿಡುಗಡೆ ವಿವರಗಳನ್ನು ಮೇಲೆ ತಿಳಿಸಿದೆ. ಶಾಶ್ವತವಾಗಿ ಕುಡಿಯುವ ನೀರನ್ನು ಪೂರೈಸುಲು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯನ್ನು 'ಜಲಧಾರೆ' ಕಾರ್ಯಕ್ರಮದಡಿ ತೆಗೆದುಕೊಳ್ಳಲು ಸರ್ಕಾರ ತಿರ್ಮಾನಿಸಿದೆ. 'ಜಲಧಾರೆ' ಕಾರ್ಯಕ್ರಮವನ್ನು ಪ್ರಾರಂಭಿಸಲು ಸಚಿವ ಸಂಪುಟ ಅನುಮೋದನೆ ಪಡೆಯಲು ಕ್ರಮ ವಹಿಸಲಾಗಿದೆ. |

ಸಂ:ಗ್ರಾಅಪ 115 ಗ್ರಾನೀಸ(3)18

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು